ಕೊಳವೆ ಬಾವಿಗಳನ್ನು ಕೊರೆಸುವುದು

52 (109) ಶ್ರೀ ಶಿವಲಿಂಗೇಗೌಡ ಕೆ.ಎಂ. :– ಮಾನ್ಯ ಸಣ್ಣ ನೀರಾವರಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರೈತರ ಜಮೀನುಗಳಿಗೆ ಕೊಳವೆ ಬಾವಿಗಳನ್ನು ಕೊರೆಸಲು ತೀರ್ಮಾನಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಈ ಕೊಳವೆ ಬಾವಿಗಳಿಗೆ ವಿದ್ಯುತ್ ಪೂರೈಸಲು ಸೌರಶಕ್ತಿಯನ್ನು ಬಳಸಲಾಗುವುದೇ ;

(ಇ) ಹಾಗಿದ್ದಲ್ಲಿ, ಕೊಳವೆ ಬಾವಿಗಳಿಗೆ ವಿದ್ಯುತ್ ಪೂರೈಸಲು ಸರ್ಕಾರವು ನಿಗದಿಪಡಿಸಿರುವ ಅನುದಾನದಲ್ಲಿ ಸೌರಶಕ್ತಿಯನ್ನು ಅಳವಡಿಸಲು ಸಾಧ್ಯವೇ ? (ಸಂಪೂರ್ಣ ಮಾಹಿತಿ ನೀಡುವುದು)

ಶ್ರೀ ಶಿವರಾಜ್ ಎಸ್. ತಂಗಡಗಿ (ಮಾನ್ಯ ಸಣ್ಣ ನೀರಾವರಿ ಸಚಿವರು) :–

(ಅ) ಹೌದು, ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆ ಅಡಿಯಲ್ಲಿ ಸಾಮೂಹಿಕ ನೀರಾವರಿ ಸೌಲಭ್ಯ ಕಲ್ಪಿಸಲು ಕೊಳವೆ ಬಾವಿಗಳನ್ನು ಕೊರೆಸಲಾಗುತ್ತಿದೆ.

(ಆ) ಇಲಾಖೆಯು ನಿಗದಿಪಡಿಸಿರುವ ಕೆಲವು ಮಾನದಂಡಗಳನ್ನು ಪೂರೈಸುವ ಕೊಳವೆ ಬಾವಿಗಳಿಗೆ ಮಾತ್ರ ವಿದ್ಯುತ್ ಪೂರೈಸಲು ಸೌರಶಕ್ತಿ ಚಾಲಿತ ಪಂಪುಗಳನ್ನು ಬಳಸಿಕೊಳ್ಳಲು ತೀರ್ಮಾನಿಸಲಾಗಿದೆ. ಇದಕ್ಕಾಗಿ ಟೆಂಡರ್ ಕರೆಯಲಾಗಿದೆ.

(ಇ) ಇಲ್ಲ, ಸಾಮೂಹಿಕ ನೀರಾವರಿ ಸೌಲಭ್ಯ ಒದಗಿಸಲು ಕೊರೆಸಲಾಗುತ್ತಿರುವ ಕೊಳವೆ ಬಾವಿಗಳಿಗೆ ಈವರೆಗೆ ಸಾಮಾನ್ಯ ವಿದ್ಯುತ್ ಸಂಪರ್ಕವನ್ನು ಕಲ್ಪಿಸಲಾಗುತ್ತಿತ್ತು. ಕೊಳವೆ ಬಾವಿಯ ಸಮೀಪ ಇರುವ ವಿದ್ಯುಚ್ಛಕ್ತಿ ಕಂಬಗಳಿಂದ ವಿದ್ಯುತ್ ಸಂಪರ್ಕ ಪಡೆಯಲು ತಗಲುವ ವೆಚ್ಚಕ್ಕೆ ಅಂದಾಜು ಪಟ್ಟಿ ಪಡೆದು, ಕಾಮಗಾರಿಗಳನ್ನು ಕಾರ್ಯಗತಗೊಳಿಸಲಾಗುತ್ತಿತ್ತು. ಈ ಅಂದಾಜುವೆಚ್ಚವು ಕೊಳವೆ ಬಾವಿ ಸ್ಥಳದಿಂದ ಹತ್ತಿರವಿರುವ ವಿದ್ಯುಚ್ಛಕ್ತಿ ಕಂಬದ ದೂರವನ್ನು ಅವಲಂಬಿತವಾಗಿತ್ತು. ಕೆಲವು ಪ್ರಕರಣಗಳಲ್ಲಿ ಅತಿ ಕಡಿಮೆ ವೆಚ್ಚದಲ್ಲಿಯೂ ಇನ್ನೂ ಕೆಲವು ಪ್ರಕರಣಗಳಲ್ಲಿ ಅತಿ ಹೆಚ್ಚಿನ ವೆಚ್ಚದಲ್ಲಿ ವಿದ್ಯುತ್ ಸಂಪರ್ಕ ಪಡೆಯಲಾಗಿದೆ. ಈ ಹಿನ್ನಲೆಯಲ್ಲಿ ಸರಾಸರಿ ವಿದ್ಯುತ್ ವೆಚ್ಚವನ್ನು ಅಂದಾಜಿನಲ್ಲಿ ಅಳವಡಿಸಲಾಗುತ್ತಿತ್ತು. ಮುಂದುವರೆದು ಸಕಾಲದಲ್ಲಿ ವಿದ್ಯುಚ್ಛಕ್ತಿ ಕಂಪನಿಗಳಿಂದ ವಿದ್ಯುತ್ ಸಂಪರ್ಕ ಪಡೆಯಲು ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಹಾಗೂ ಅಸಮರ್ಪಕ ವಿದ್ಯುಚ್ಛಕ್ತಿ ಪೂರೈಕೆಯನ್ನು ಗಮನದಲ್ಲಿಟ್ಟುಕೊಂಡು ಸೌರಶಕ್ತಿಯ ಪಂಪ್‌ಗಳನ್ನು ಬಳಸಿಕೊಳ್ಳಲು ಪ್ರಸ್ತಾಪಿಸಲಾಗಿದೆ.

ಈ ಕುರಿತು 2014–15ನೇ ಸಾಲಿನ ಆಯವ್ಯಯ ಭಾಷಣದಲ್ಲಿ "ಸಣ್ಣ ನೀರಾವರಿ ಇಲಾಖೆಯ ಮೂಲಕ ಪರಿಶಿಷ್ಟ ಜಾತಿ ಉಪಯೋಜನೆ ಹಾಗೂ ಪರಿಶಿಷ್ಟ ಪಂಗಡಗಳ ಉಪಯೋಜನೆಗಳಡಿ

ಸಮುದಾಯ ಏತ ನೀರಾವರಿ ಯೋಜನೆಗಳಿಗೆ ಪ್ರಾಯೋಗಿಕವಾಗಿ "ಸೂರ್ಯ ಜ್ಯೋತಿ–ರೈತರ ಬಾಳಿನ ಪರಂಜ್ಯೋತಿ: ಎಂಬ ಕಾರ್ಯಕ್ರಮದಡಿ ಸೌರಶಕ್ತಿ ಚಾಲಿತ ಪಂಪುಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರನ್ವಯ ಇಲಾಖೆಯು ಸೌರಶಕ್ತಿ ಪಂಪುಗಳನ್ನು ತಯಾರಿಸುವ ಸಂಸ್ಥೆಗಳೊಂದಿಗೆ ಚರ್ಚಿಸಿದ್ದು, ಮೇಲ್ನೋಟಕ್ಕೆ ಈ ಸೌರಶಕ್ತಿ ಪಂಪುಗಳನ್ನು ಉಪಯೋಗಿಸಿಕೊಳ್ಳಲು ತಗಲುವ ವೆಚ್ಚವು ಸಾಮಾನ್ಯ ವಿದ್ಯುಚ್ಛಕ್ತಿ ಸಂಪರ್ಕಕ್ಕಿಂತ ಹೆಚ್ಚಾಗುವುದೆಂದು ಕಂಡುಬಂದಿದೆ. ಸೌರಶಕ್ತಿ ಪಂಪುಗಳನ್ನು 500 ಅಡಿಗಳವರೆಗೆ ಹಾಗೂ ಸಮರ್ಪಕವಾಗಿ ನೀರಿನ ಲಭ್ಯತೆ ಇರುವ ಹಾಗೂ ನಿರಂತರವಾಗಿ ಬಿಸಿಲು ಇರುವ ಜಿಲ್ಲೆಗಳಾದ ದಕ್ಷಿಣ ಕರ್ನಾಟಕದ ಹಾಸನ, ಮೈಸೂರು, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಹಾಗೂ ಚಾಮರಾಜನಗರ ಜಿಲ್ಲೆಯ (ಕೊಳ್ಳೆಗಾಲ ಮತ್ತು ಯಳಂದೂರು ತಾಲ್ಲೂಕುಗಳಲ್ಲಿ) ಹಾಗೂ ಉತ್ತರ ಕರ್ನಾಟಕದ ಬೆಳಗಾವಿ, ಧಾರವಾಡ, ಹಾವೇರಿ ಗದಗ, ಬಿಜಾಪುರ, ಬಾಗಲಕೋಟೆ, ಬೀದರ್, ಗುಲ್ಬರ್ಗಾ, ರಾಯಚೂರು, ಯಾದಗಿರಿ, ಕೊಪ್ಪಳ ಮತ್ತು ಬಳ್ಳಾರಿ ಜಿಲ್ಲೆಗಳಲ್ಲಿ ಅಳವಡಿಸಲು ತೀರ್ಮಾನಿಸಿ, ಈ ಪ್ರಕ್ರಿಯೆಗೆ ಟೆಂಡರ್ ಆಹ್ವಾನಿಸಲಾಗಿದೆ. ಟೆಂಡರ್ ಅಂತಿಮಗೊಂದ ನಂತರ ಪ್ರತಿ ಸೌರಶಕ್ತಿ ಪಂಪ್‌ಗೆ ತಗಲುವ ವೆಚ್ಚದ ವಿವರಗಳು ತಿಳಿದು ಬರಲಿದೆ.

ಭೂಮಿ ಕಾರ್ಯ ಸರ್ವೆ

53 (111) ಶ್ರೀ ಶಿವಲಿಂಗೇಗೌಡ ಕೆ.ಎಂ. (ಅರಸೀಕೆರೆ):– ಮಾನ್ಯ ಕಂದಾಯ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ :–

(ಅ) ಹಾಸನ ಜಿಲ್ಲೆಯ ಅರಸೀಕೆರೆ ಮತಕ್ಷೇತ್ರದಲ್ಲಿ ಭೂಮಿ ಸರ್ವೆ ಕಾರ್ಯವನ್ನು ನಮೂನೆ–1 ಮತ್ತು 5ರ ಮಾದರಿಯಲ್ಲಿ ಕೈಗೊಳ್ಳಲಾಗುತ್ತಿದೆಯೇ ;

(ಆ) ಹಾಗಿದ್ದಲ್ಲಿ, ತಾಲ್ಲೂಕಿನ ಎಷ್ಟು ಗ್ರಾಮಗಳಲ್ಲಿ ಭೂಮಿ ಸರ್ವೆ ಕಾರ್ಯಾಚರಣೆಯಾಗುತ್ತಿದೆ ? (ಸಂಪೂರ್ಣ ಮಾಹಿತಿ ನೀಡುವುದು)

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು) :–

(ಅ) ಹೌದು

(ಆ) ಅರಸೀಕೆರೆ ತಾಲ್ಲೂಕಿನ ಗ್ರಾಮಗಳಲ್ಲಿ ಶೇಕಡಾ–75 ರಷ್ಟು 1 ರಿಂದ 5 ನಮೂನೆಗಳನ್ನು ಭರ್ತಿ ಮಾಡುವ ಕಾರ್ಯ ಪೂರ್ಣಗೊಂಡಿದ್ದು, ಪರಿಶೀಲನಾ ಹಂತದಲ್ಲಿದ್ದು. ಇನ್ನುಳಿದ ಗ್ರಾಮಗಳ ನಮೂನೆ 1 ರಿಂದ 5 ಭರ್ತಿ ಮಾಡುವ ಕಾರ್ಯ ಪೂರ್ಣಗೊಂಡ ನಂತರ ಭೂಮಿ ಸರ್ವೆ ಕಾರ್ಯವನ್ನು ಪ್ರಾರಂಭಿಸಲಾಗುವುದು.